ಸದರೀ ದರಖಾಸ್ತುದಾರರಾದ ವೇದವ್ಯಾಸಾಚಾರ್ಯರ ಅರ್ಜೀಯನ್ನು 1884ನೇ ಇಸವಿ ಮಾರ್ಚೀ ತಿಂಗಳು ತಾರೀಖು 26ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರಟಿಫಿಕೇಟ್ ಪಡೆಯುತಕ್ಕ ಬಾಧ್ಯತೆಯನ್ನು ವಿಮರ್ಶೆಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಭೀಮಶೇನಾಚಾರ್ಯರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಫಿಬ್ರವರೀ ತಿಂಗಳು 2ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ಸಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ವಿ. ಎ. ನರಸಿಹ್ಮಯ್ಯಂಗಾರ್,
ಡಿಸ್ಟ್ರಿಕ್ಟು ಜಡ್ಜ.

ತಾರೀಖು 30ನೇ ಜನವರೀ 1884.

ಇದರಿಂದ ತಿಳಿಯಪಡಿಸುವದೇನೆಂದರೆ, ಮಳವಳ್ಳಿ ಸಬ್ ರಿಜಿಸ್ಟ್ರೀ ಆಫೀಸಿನಲ್ಲಿ ಬೇವಾರಸಾಗಿ ಇರತಕ್ಕ ಕೆಳಗೆ ವಿವರಿಸೋಣಾದ ದಸ್ತೈವಜನ್ನು ಹಾಜರ್ಮಾಡಿದವನೆ ಆಗಲಿ ಅಥವಾ ವಾಪಸುಪಡಿಯಲಿಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನೆ ಆಗಲಿ ಈ ನೋಟೀಸ್ ತಾರೀಖು ಲಾಗಾಯಿತು ಒಂದು ತಿಂಗಳವಳಗಾಗಿ ಸಬ್ ರಿಜಸ್ಟ್ರಾರ್ ರೂಬರೂ ಹಾಜರಾಗಿ ಅದನ್ನು ವಾಪಸ್ ತೆಗದುಕ್ಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರು ರಿಜಿಸ್ಟ್ರೇಷನ್ ಆಕ್ಟು '85ನೇ ಸೆಕ್ಷನ್' ಅನುಸರಿಸಿ ಅದು ನಾಶಪಡಿಸೆಲ್ಪಡುವದು.

ನಂಬರು.	ದಸ್ತಾವೇಜು ಬರದುಕೊಟ್ಟವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜು ಬರಿಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಪೂರೈಸಿರುವ ತಾರೀಖು.	ರಿಜಿಸ್ಟ್ರಿಯ ತಾರೀಖು	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
213 81—82	ಪೂರಿಗಾಲಿ ಕಸಬೇಲಿರುವ ವೆಂಕಟರಮಣಾಚಾರಿ ಮಗ ತಿಮ್ಮಪ್ಪ, ಕೃಷ್ಣಪ್ಪಬ್ಯಾಹ್ಮಣ	ಪೂರಿಗಾಲಿ ಹೋಬಳಿ ಮೈಕಿ ಮರಳಹಳ್ಳಿ ಗ್ರಾಮದಾಖಲೆ ಕೃಷ್ಣಯ್ಯಂಗಾರ್ ಹುಂಡೀಲಿರುವ ವೆಂಕಟನರಸಿಂಹಾಚಾರ್ ಮಗ ಕೃಷ್ಣಾಚಾರಿ	20—1—82	20—1—82	(50) ರೂಪಾಯಿನ ಮನೆ ಆಧಾರ ಪತ್ರ.

ಅಬ್ದುಲ್ ಖಾದರ್, ಕೆ. ಬಿ, ರಿಜಿಸ್ಟ್ರಾರ್.

ತಾರೀಖು 1ನೇ ಫಿಬ್ರವರೀ 1884.

ಇದರಿಂದ ತಿಳಿಸುವದೇನೆಂದರೆ, ಮೈಸೂರು ಜೈಲ್‌ನಲ್ಲಿ ಖೈದು ಮಾಡಲ್ಪಟ್ಟಿರುವ ಖೈದಿಗಳ ಉಪಯೋಗದ ಬಗ್ಗೆ ಸ್ರ 1884ನೇ ಇಸವಿ ಏಪ್ರಿಲ್ ಗುರ್ವೇ ತಾರೀಖು ಮೊದಲು 1885ನೇ ಮಾರ್ಚೀ 31ನೇ ತಾರೀಖುವರಿಗೆ ಎರಡು ದಿನಗಳೂ ಸೇರಿ ಬೇಕಾದ ಆಹಾರ ವಗೈರೇ ದರೋಬಸ್ತು ಜಿನಸುಗಳನ್ನೂ ಕಂಟ್ರಾಕ್ಟು ಮೂಲಕ ಸರಬರಾಯಿ ಮಾಡುವ ಬಗ್ಗೆ ಬರುವ ಬಂದು ಮೊಹರ್ಲ್ಪಟ್ಟ ದರಖಾಸ್ತುಗಳನ್ನು ಮೈಸೂರು ಜೈಲ್ ಸೂಪರ್‌ಟೆಂಡೆಂಟರವರು, ಸ್ರ 1884ನೇ ಇಸವಿ ಮಾರ್ಚೀ 15ನೇ ತಾರೀಖುವರಿಗೆ ತೆಗದುಕೊಳ್ಳುವರು.

2. ಸದರೀ ತಾರೀಖು ತರುವಾಯ ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರದು.

3. "ಮೈಸೂರು ಜೈಲ್‌ಗಾಗಿ ಆಹಾರ ಪದಾರ್ಥಗಳ ಸರಬರಾಯಿ ಬಗ್ಗೆ ದರಖಾಸ್ತುಗಳು" ಯಂಬದಾಗಿ ವಿಳಾಸ ಬರೆಯಲ್ಪಡತಕ್ಕದ್ದು.

4. 500 ರೂಪಾಯಿಗಳು ನಗದಾಗಿ ಅಥವಾ ಕರೆನ್ಸೀ ನೋಟುಗಳ ಮೂಲಕ ಡಿಪಾಜಿಟ್‌ನೀಗೆ ಕಳುಹಿಸಲ್ಪಟ್ಟ ಹೊರತು ಯಾವ ದರಖಾಸ್ತುಗಳೂ ತೆಗದುಕೊಳ್ಳಲ್ಪಡಲಾರವು.

5. ದರಖಾಸ್ತುಗಳು ಮೈಸೂರು ಜೈಲ್ ಆಫೀಸಿನಲ್ಲಿ, ಹಾಜರಾಗಲಿಕ್ಕೆ ಇಷ್ಟವುಳ್ಳ ದರಖಾಸ್ತುದಾರರ ರೂಬರೂ ಮೇಲ್ಕಂಡ ತಾರೀಖಿನೊಳಗೆ ಪ್ರಾತಃಕಾಲ 7 ಘಂಟೆಗೆ ಮೈಸೂರು ಜೈಲ್ ಸೂಪರ್‌ಟೆಂಡೆಂಟರಿಂದ ಖುಲ್ಲಾ ಮಾಡಲ್ಪಡುವವು.

6. ದರೋಬಸ್ತು ದರಖಾಸ್ತುಗಳಲ್ಲಿಯೂ, ಈ ಕೆಳಗೆ ನಮೂದಿಸುವ ತರಗತಿಯ ಪ್ರತಿ ಖೈದಿಗೂ ದಿನ ಒಂದಕ್ಕೆ ಆಗತಕ್ಕ ದರವು ನಮೂದಿಸಲ್ಪಡತಕ್ಕದ್ದು.

134

			ರೂ.	ಆ.	ಪೈ.
ನೇಟಿವ್ ಕೂಲಿಯವರಾದ ಗಂಡಸರು A ಕ್ಲಾಸ್					
ಡಿಟೋ	ಡಿಟೋ	B ,,			
ಡಿಟೋ	ಡಿಟೋ	C ,,			
ಡಿಟೋ ಕೂಲೀ ಮಾಡದ ಗಂಡಸರು, ಹೆಂಗಸರು, ಸುದಾ ಖೈದಿನಲ್ಲಿ ಮತ್ತು ವಿಚಾರಣೆಯಲ್ಲಿ ಇರತಕ್ಕವರು D ಕ್ಲಾಸ್					
ಡಿಟೋ	ಹುಡುಗರಾದ ಖೈದೀರು				
ಯೂರೋಪಿಯರ್ಗಳು ವ ಈಸ್ಟ್ ಇಂಡಿಯರ್ಗಳು					
ರಾಗಿ ಸಹಿತ ಆಸಪತ್ರೆ ಪಥ್ಯ					
ಅಕ್ಕಿ ಸಹಿತ	ಡಿಟೋ				

7. ದರಖಾಸ್ತು ಮಾಡಲ್ಪಟ್ಟ ದರಗಳು ಆಹಾರ ಜಿನಸೀಗಳ ಸ್ಕೇಲ್ ಪಟ್ಟಿಯಲ್ಲಿ ನಮೂದಿರುವ ಪದಾರ್ಥಗಳು ಮಾತ್ರವಲ್ಲದೆ, ಸ್ಕೇಲ್ ಪಟ್ಟೀ ಪ್ರಕಾರ ಆಸಪತ್ರೆ ಪಥ್ಯಪದಾರ್ಥಗಳು, ಕಾಹಿಲೇ ಮನುಷ್ಯರಿಗೆ ವಿಶೇಷ ಪದಾರ್ಥಗಳು, ನಷ್ಟವಾಗತಕ್ಕ ಪದಾರ್ಥಗಳು, ವೀಪದ ಯಂತ್ರೆ, ಲಾಂದ್ರಗಳು, ಮತ್ತು ಅವುಗಳ ರಿಪೇರಿ ಮಾಡಿಸುವಣ, ಅಡಿಗೆ ಮಾಡುವ ಬಗ್ಯೆ ತಾಂಬ್ರ ಮತ್ತು ಮಣ್ಣಿನ ಪಾತ್ರೆಗಳು, ಖೈದೀರು ಪೂಟು ಮೂಡುವ ಹರಿವಾಣಗಳು, ಪಾಯಖಾನೆ ಮತ್ತು ವಣಗಿದ ಮಣ್ಣಿನ ಬಗ್ಯೆ ಗೂಡೆಗಳು, ಜೈಲ್‌ನಲ್ಲಿರತಕ್ಕ ಖೈದೀರು ಸ್ನಾನ ಮಾಡಲಿಕ್ಕೆ ಶೀಗೇಕಾಯಿ, ತಮಾಂ ತಾಂಬ್ರ ಪಾತ್ರೆಗಳ ರಿಪೇರಿ ವ ಕಲಾಯಿ, ಪರಕೆಗಳು, ಕುಡಿಯುವ ಬಗ್ಯೆ ಮೊಗೆಗಳು, ಹೆಣ್ಣು ಖೈದೀರ ಮಕ್ಕಳಿಗೆ ಬೇಕಾದ ಹಾಲು, ರೊಟ್ಟಿ, ಸಕ್ಕರೆ ವಗೈರೇ ಪದಾರ್ಥಗಳು, ಹೊಗೆ ಹಾಕುವದಕ್ಕೆ ಗಂಧಕ, ಚವಳುಮಣ್ಣು, ಮತ್ತು ಖೈದಿಗಳಿಗೆ ಕ್ರಮವಾಗಿ ಸರಬರಾಯಿ ಮಾಡಲ್ಪಡುವ ಬಟ್ಟೆ ಶಿವಾಯಿ, ತಮಾಂ ಚಿಲ್ಲರೇ ಪದಾರ್ಥಗಳೂ ಸಹ ಅಡಗಿರತಕ್ಕದ್ದು.

8. ಸೂಪರ್ಟಿಂಡೆಂಟರವರು ಯಾವ ದರಖಾಸ್ತನ್ನಾಗಲಿ ತಿರಸ್ಕರಿಸುವ ಸ್ವಾತಂತ್ರ್ಯವನ್ನು ತಮ್ಮಲ್ಲಿ ವುಳಿಸಿಕೊಂಡಿರುತ್ತಾರೆ, ಹೀಗೆ ತಿರಸ್ಕರಿಸಲಿಕ್ಕೆ ಯಾವ ನಿಮಿತ್ತವನ್ನೂ ಅವರು ತಿಳಿಸಬೇಕಾದ್ದಿಲ್ಲವು.

9. ಮುಂಜೂರಾದ ದರಖಾಸ್ತುದಾರನ, ಡಿಪಾಜಿಟ್ ಮೊಬಲಗು ನಿಲ್ಲಿಸಿಕೊಳ್ಳಲ್ಪಟ್ಟು, ಆತನು ಕಂಟ್ರಾಕ್ಟು ಮುಚ್ಚಲಿಕ್ಕೆ ಬರದು ಕೊಡಲಿಕ್ಕಾಗಲಿ, ನಗದಾದರೂ ಗವರ್ಮೆಂಟ್ ಪತ್ರಗಳ ಮೂಲಕವಾದರೂ 500 ರೂಪಾಯಿಗಳ ಮೊಬಲಗಿಗೆ ಜಾಮೀನನ್ನು ತನ್ನ ದರಖಾಸ್ತು ಮಂಜೂರಾದ ಸಂಗತಿ ತನಿಗೆ ತಿಳಿಸಲ್ಪಟ್ಟ ತಾರೀಖು ಮೊದಲು ಬಂದು ವಾರದ ಒಳಗಾಗಿ ಕೊಡಲಿಕ್ಕೆ ತಪ್ಪಿದರೆ, ಸದರಿ ಡಿಪಾಜಿಟ್ ಸರಕಾರಕ್ಕೆ ಸೇರಿಸಿ ಕೊಳ್ಳಲ್ಪಡುವದು.

10. ಕಂಟ್ರಾಕ್ಟುದಾರನಿಗೆ ನಗದು ಅಡ್ವಾನ್ಸು ಯಾವದೂ ಕೊಡಲ್ಪಡಲಾರದು, ಸರಬರಾಯಿ ಮಾಡಲ್ಪಟ್ಟ ಪದಾರ್ಥಗಳಿಗೆ ಪ್ರತಿ ತಿಂಗಳು 1ನೇ ತಾರೀಖಿಗೆ ತರುವಾಯ ಸಾಧ್ಯವಾದಷ್ಟು ತ್ವರೆಯಾಗಿ ಮೈಸೂರು ಜೈಲ್ ಸೂಪರ್ಟಿಂಡೆಂಟರವರಿಂದ ಮೊಬಲಗು ಕೊಡಲ್ಪಡುವದು.

11. ಕಂಟ್ರಾಕ್ಟುದಾರನಿಗೆ ಒಂದು ಖೋಲಿಯು ಬಿಡಲ್ಪಟ್ಟು ಅದರಲ್ಲಿ ಆತನು ನಷ್ಟವಾಗದ ದರೋಬಸ್ತು ಪದಾರ್ಥಗಳನ್ನೂ, ಇಟ್ಟುಕೊಳ್ಳಬಹುದು. ಮಾಂಸ ವಗೈರೇ ನಷ್ಟವಾಗುವ ಪದಾರ್ಥಗಳು ಪ್ರತಿ ದಿನ ಬೆಳಿಗ್ಗೆ 7¼ ಘಂಟೆಗೆ ಜೈಲ್‌ನಲ್ಲಿ ಇರತಕ್ಕದ್ದು.

12. ಕಂಟ್ರಾಕ್ಟು ವಳ ಪಿಕ್ಕಿಗೆ ಕೊಡಲ್ಪಡಕೂಡದು.

13. ಕಂಟ್ರಾಕ್ಟಿನ ನಿಬಂಧನೆಗೆ ತಪ್ಪಿ ನಡೆಯುವ ಬಗ್ಯಾಗಲಿ, ಕಿರದು ತರದ ಯಾವ ಪದಾರ್ಥಗಳನ್ನು ಕೊಡುವ ಬಗ್ಯಾಗಲಿ ಮೈಸೂರು ಜೈಲ್ ಸೂಪರ್ಟಿಂಡೆಂಟರವರ ಯಖ್ತ್ಯಾರಿಯಿಂದ 50 ರೂಪಾಯಿಗೆ ಮೀರದ ಬಂದು ಜುರ್ಮಾನೆಯು ಹಾಕಲ್ಪಡುವದು, ಬಾರ್ ಬಾರ್ ಆ ಮೇರೆ ತಪ್ಪಿದರೆ ಕಂಟ್ರಾಕ್ಟು ರದ್ದು ಮಾಡಲ್ಪಟ್ಟು ಜಾಮೀನ್ ಮೊಬಲಗು ಸರ್ಕಾರಕ್ಕೆ ಜೇರಿಸಿಕೊಳ್ಳಲ್ಪಡುವದು.

14. ಕಂಟ್ರಾಕ್ಟು ತಪ್ಪಿ ನಡೆಯುವ ದರೋಬಸ್ತು ಸಂಗತಿಗಳೊಳಗೂ ಮೈಸೂರು ಜೈಲ್ ಸೂಪರ್ಟಿಂಟಿಂಟರವರ ನಿರ್ಣಯವೇ ಆಖೈರಾಗಿರತಕ್ಕದ್ದು.

ಕಂಟ್ರಾಕ್ಟುದಾರನು ಖೈದಿಗಳ ವುಪಯೋಗಾರ್ಥ ತರಕಾರಿಗಳನ್ನು ದರ ಪಾನಿಗೆ 4 ಕಾಸುಗಳ ಮೇರಿಗೆ ಖಾಯಂ ದರದ ಪ್ರಕಾರ ಜೈಲ್ ತೋಟದಿಂದಲೇ ಕೊಳ್ಳುವದಕ್ಕೆ ಬದ್ಧನಾಗಿರತಕ್ಕದ್ದು.

15. ಆಹಾರ ದರದ ಪಟ್ಟಿಯನ್ನು ಇತರ ಹೆಚ್ಚಿಗೆ ತಪಶೀಲ್‌ಗಳನ್ನು ಸುದಾ ಸೂಪರ್ಟಿಂಡೆಂಟರವರನ್ನ ಕೇಳಿ ತಿಳದುಕೊಳ್ಳಬಹುದು.

ಪಿ. ಹೆಚ್. ಬೆರ್ಸ್,
ಮೈಸೂರು ಜೈಲ್ ಸೂಪರ್ಟಿಂಡೆಂಟ್.